ಸಿಸಿ ನಂ. 227/2023 ಪಿಡಬ್ಲೂ :1

ದಿನಾಂಕಃ 19-02-2024 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾಯಿತು.

ಫಿರ್ಯಾದುದಾರ ಸಂಸ್ಥೆಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಯ ಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆ ಎಂದು ಹಾಗೂ ಸದರಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಯನ್ನು ಪಿಡಬ್ಲ್ಯೂ-1 ಎಂದು ಪರಗಣಿಸಲಾಗಿದೆ .

**ಮುಂದುವರೆದ ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರವಾಗಿಃ ಶ್ರೀ ಪಿ ಜಿ ಹೆಚ್ ವಕೀಲರಿಂದಃ**

2. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ . ನಡವಳಿಕೆಯ ಯಥಾ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -1 ಎಂದು ಗುರುತಿಸಲಾಯಿತು. ಆರೋಪಿಯು ನೀಡಿದ ಚೆಕ್ ಹಾಜರು ಪಡಿಸಿದ್ದು ಅದನ್ನು ನಿಪಿ -2 ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ-2 ಎ ಎಂದು ಗುರುತಿಸಲಾಯಿತು. ಬ್ಯಾಂಕನವರು ಕೊಟ್ಟಿರುವ ಮೆಮೊವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -3 ಎಂದು ಗುರುತಿಸಲಾಯಿತು. ನಾವು ನಮ್ಮ ವಕೀಲರ ಮುಖಾಂತರ ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -4 ಎಂದು, ಅಂಚೆ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-5 ಎಂದು, ಅಂಚೆ ಸ್ವೀಕೃತಿ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -6 ಎಂದು ಗುರುತಿಸಲಾಯಿತು . ನಿಪಿ-6 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ಸಾಲದ ಅರ್ಜಿಯ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಸಾಲದ ಅರ್ಜಿಯ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲದ ಅರ್ಜಿಯ ಯಥಾ ನಕಲನ್ನು ನಿಪಿ-7 ಎಂದು ಗುರುತಿಸಲಾಯಿತು .

ಡಿಮಾಂಡ್ ಪ್ರಾಮಿಸರಿ ನೋಟಿನ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಡಿಮಾಂಡ್ ಪ್ರಾಮಿಸರಿ ನೋಟಿನ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಡಿಮಾಂಡ್ ಪ್ರಾಮಿಸರಿ ನೋಟಿನ ಯಥಾ ನಕಲನ್ನು ನಿಪಿ-8 ಎಂದು ಗುರುತಿಸಲಾಯಿತು . ಸಾಲದ ಕರಾರು ಪತ್ರದ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಸಾಲದ ಕರಾರು ಪತ್ರದ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲದ ಕರಾರು ಪತ್ರದ ಯಥಾ ನಕಲನ್ನು ನಿಪಿ-9 ಎಂದು ಗುರುತಿಸಲಾಯಿತು . ಭದ್ರತಾ ಪತ್ರದ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಭದ್ರತಾ ಪತ್ರದ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಭದ್ರತಾ ಪತ್ರದ ಯಥಾ ನಕಲನ್ನು ನಿಪಿ – 10 ಎಂದು ಗುರುತಿಸಲಾಯಿತು .ರಸೀದಿಯ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ರಸೀದಿಯ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ರಸೀದಿಯ ಯಥಾ ನಕಲನ್ನು ನಿಪಿ- 11 ಎಂದು ಗುರುತಿಸಲಾಯಿತು . ಸಾಲದ ಖಾತೆಯ ಉತಾರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ- 12 ಎಂದು ಹಾಗೂ ನಿಪಿ – 12 ರ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ –13 ಎಂದು ಗುರುತಿಸಲಾಯಿತು.

( ಪಾಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ಕುಮಟಾ.